ಇ) ಸಾರ್ವಜನಿಕರು ಗ್ರಾಮಾಂತರ ಪ್ರದೇಶದಲ್ಲಿ ಗ್ರಾಮ ಪಂಚಾಯಿತಿ ಮತ್ತು ಅಟಲ್ ಜೀ ಜನಸ್ನೇಹಿ ಕೇಂದ್ರಗಳಲ್ಲಿ ಮತ್ತು ನಗರ/ಪಟ್ಟಣ ಪ್ರದೇಶಗಳಲ್ಲಿ ಕರ್ನಾಟಕ ಒನ್/ಬೆಂಗಳೂರು ಒನ್ ಹಾಗೂ ಖಾಸಗಿ ಸೇವಾ ಪೋಟೋ ಕೇಂದ್ರಗಳ ಮೂಲಕ ಆನ್‌ಲೈನ್‌ನಲ್ಲಿ ಪಡಿತರ ಚೀಟಿ ಅರ್ಜಿ ಸಲ್ಲಿಸುವ ವ್ಯವಸ್ಥೆಯನ್ನು ಕಲ್ಪಿಸಲಾಗಿರುತ್ತದೆ. ಈ ರೀತಿ ಸಲ್ಲಿಸಲಾದ ಅರ್ಜಿಗಳನ್ನು ಆಹಾರ ನಿರೀಕ್ಷಕರು ಸೂಕ್ತ ಪರಿಶೀಲನೆಯ ತರುವಾಯ ಆನ್‌ಲೈನ್‌ನಲ್ಲಿಯೇ ಅನುಮೋದಿಸಿ ಪಡಿತರ ಚೀಟಿಗಳನ್ನು ಮುದ್ರಿಸುವ ವ್ಯವಸ್ಥೆ ಕಲ್ಪಿಸಲಾಗಿದೆ. ಪಡಿತರ ಚೀಟಿ ಸಿದ್ಧಗೊಂಡ ತಕ್ಷಣ ಪಡಿತರ ಚೀಟಿಯ ಅರ್ಜಿದಾರರಿಗೆ ಎಸ್.ಎಂ.ಎಸ್. ಮೂಲಕ ಮಾಹಿತಿ ರವಾನಿಸುವ ವ್ಯವಸ್ಥೆಯನ್ನು ಮಾಡಲಾಗಿದೆ. ಅಲ್ಲದೆ, ಪಡಿತರ ಚೀಟಿ ವಿತರಣೆಯನ್ನು ಸುಗಮಗೊಳಿಸುವ ಸಲುವಾಗಿ ಆಹಾರ ಕಚೇರಿಯೂ ಸೇರಿದಂತೆ ಗ್ರಾಮ ಪಂಚಾಯಿತಿ/ ಕರ್ನಾಟಕ ಒನ್/ ಬೆಂಗಳೂರು ಒನ್ ಹಾಗೂ ಅಟಲ್ ಜೀ ಜನ ಸ್ನೇಹಿ ಕೇಂದ್ರಗಳ ಮೂಲಕವೂ ಪಡಿತರ ಚೀಟಿ ವಿತರಣಾ ಕಾರ್ಯ ನಿರ್ವಹಿಸುವ ವ್ಯವಸ್ಥೆ ಕಲ್ಪಿಸಲಾಗಿದೆ.

ಆಸ್ಪತ್ರೆಗಳಲ್ಲಿ ಸ್ಟಾಫ್ ನರ್ಸ್‌ಗಳ ಕೊರತೆ

2716 (3664); ಶ್ರೀ ಮಧು ಬಂಗಾರಪ್ಪ ಎಸ್. (ಸೊರಬ)

ಅ) ರಾಜ್ಯಾದ್ಯಂತ ಸರ್ಕಾರಿ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಸ್ಟಾಫ್ ನರ್ಸ್ ಹುದ್ದೆಗಳು ಮಂಜೂರಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಸ್ಟಾಫ್ ನರ್ಸ್ ಹುದ್ದೆಗಳನ್ನು ಪ್ರತಿಯೊಂದು ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ಮಂಜೂರಾತಿ ಮಾಡುವ ಪ್ರಸ್ತಾವನೆ ಸರ್ಕಾರದ ಗಮನದಲ್ಲಿದೆಯೇ (ಸಂಪೂರ್ಣ ವಿವರಣೆ ನೀಡುವುದು);

ಇ) ಹಾಗಿದ್ದಲ್ಲಿ, ಎಷ್ಟು ಅವಧಿಯೊಳಗೆ ಸದರಿ ಹುದ್ದೆಗಳನ್ನು ಮಂಜೂರಾತಿ ಮಾಡಿ ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುವುದು (ವಿವರವಾದ ಮಾಹಿತಿ ನೀಡುವುದು)?

ಶ್ರೀ ಯು.ಟಿ. ಖಾದರ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ರಾಜ್ಯದಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ವಿವಿಧ ಸರ್ಕಾರದ ಆದೇಶಗಳಲ್ಲಿ ಈಗಾಗಲೇ ತಲಾ ಒಂದು ಸ್ಟಾಫ್ ನರ್ಸ್ ಹುದ್ದೆಯನ್ನು ಮಂಜೂರು ಮಾಡಲಾಗಿದೆ. ಆದರೆ, ಕೆಲವೊಂದು ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಸ್ಟಾಫ್ ನರ್ಸ್ ಹುದ್ದೆಗಳು ಮಂಜೂರಾಗಿರುವುದಿಲ್ಲ.

ಅಲ್ಲದೆ, ಹೆರಿಗೆ ಪ್ರಕರಣಗಳು ಹೆಚ್ಚಾಗಿ ನಡೆಯುತ್ತಿರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು 24x7 ಎಂದು ಪರಿವರ್ತಿಸಿ, ಎನ್.ಹೆಚ್.ಎಂ. ವತಿಯಿಂದ ಹೆಚ್ಚುವರಿಯಾಗಿ ಒಬ್ಬ ಶುಶ್ರೂಷಕರನ್ನು ಹಾಗೂ ಒಬ್ಬ ವೈದ್ಯರನ್ನು ಗುತ್ತಿಗೆ ಆಧಾರದ ಮೇಲೆ ನೇಮಿಸಲು ಅವಕಾಶ ಕಲ್ಪಿಸಲಾಗಿದೆ.

ಆ) ಸರ್ಕಾರದ ಆದೇಶ ಸಂಖ್ಯೆ ಆಕುಕ/98/ಸಿಜಿಇ/2013,

ದಿನಾಂಕ: 18–07–2014ರ ಆದೇಶದಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ನಿರ್ದೇಶನಾಲಯದ ವ್ಯಾಪ್ತಿಯ ಅಡಿಯಲ್ಲಿ ಬರುವ ಉಪಕೇಂದ್ರಗಳು, ಪ್ರಾಥಮಿಕ ಆರೋಗ್ಯ ಕೇಂದ್ರಗಳು, ಸಮುದಾಯ ಆರೋಗ್ಯ ಕೇಂದ್ರ, ತಾಲ್ಲೂಕು ಆಸ್ಪತ್ರೆ ಮತ್ತು ಜಿಲ್ಲಾ ಆಸ್ಪತ್ರೆಗಳ ಹಾಸಿಗೆ ಸಾಮರ್ಥ್ಯಕ್ಕೆ ಅನುಸಾರವಾಗಿ ವಿವಿಧ ವೃಂದಗಳ ಹುದ್ದೆಗಳನ್ನು ಮರುಹಂಚಿಕೆ ಮಾಡಲಾಗಿದೆ. ಅದರನ್ವಯ ಪ್ರತಿ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ಒಂದು ಶುಶ್ರೂಷಕರ ಹುದ್ದೆಯನ್ನು ಮರುಹಂಚಿಕೆ ಮಾಡಲಾಗಿದೆ.

ಇ) ಇಲಾಖೆಯಲ್ಲಿ ಖಾಲಿ ಇರುವ ಶುಶ್ರೂಷಕ ಹಾಗೂ ಇತರೆ ಹುದ್ದೆಗಳನ್ನು ವಿಶೇಷ ನೇಮಕಾತಿ ನಿಯಮಗಳ ಮುಖಾಂತರ ಭರ್ತಿ ಮಾಡಲು ಕ್ರಮವಹಿಸಲಾಗುತ್ತಿದೆ.

ಆಸ್ಪತ್ರೆಗಳಲ್ಲಿ ಸ್ಕ್ಯಾನಿಂಗ್ ಮೆಷಿನ್‌ಗಳನ್ನು ಅಳವಡಿಸುವುದು

2717 (3665); ಶ್ರೀ ಎಸ್. ಮಧು ಬಂಗಾರಪ್ಪ (ಸೊರಬ)

ಅ) ರಾಜ್ಯಾದ್ಯಂತ ತಾಲ್ಲೂಕು ಮಟ್ಟದ ಸಾರ್ವಜನಿಕ ಆಸ್ಪತ್ರೆಗಳಲ್ಲಿ ರೋಗಿಗಳ ಖಾಯಿಲೆಗಳನ್ನು ಪತ್ತೆಹಚ್ಚಲು ಅತಿ ಅವಶ್ಯಕವಾಗಿರುವ ಸ್ಕ್ಯಾನಿಂಗ್ ಮೆಷಿನ್ ಮತ್ತು ಅದಕ್ಕೆ ಸಂಬಂಧಿಸಿದ ಸಿಬ್ಬಂದಿ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಮೇಲ್ಕಂಡ ಸೌಲಭ್ಯ ಕಲ್ಪಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ (ವಿವರವಾದ ಮಾಹಿತಿ ನೀಡುವುದು);

ಇ) ಹಾಗಿದ್ದಲ್ಲಿ, ಇದರ ಬಗ್ಗೆ ಸರ್ಕಾರ ಕೈಗೊಳ್ಳುವ ಕ್ರಮಗಳೇನು (ವಿವರಣೆ ನೀಡುವುದು)?

ಶ್ರೀ ಯು.ಟಿ. ಖಾದರ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ಇದುವರೆವಿಗೂ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಆಸ್ಪತ್ರೆಗಳಿಗೆ ಬೇಡಿಕೆಗೆ ಅನುಸಾರವಾಗಿ ಸ್ಕಾನಿಂಗ್ ಮಿಷನ್‌ಗಳನ್ನು ಸರಬರಾಜು ಮಾಡಲಾಗಿದೆ. ಈ ಯಂತ್ರಗಳ ನಿರ್ವಹಣೆಗೆ ಅಗತ್ಯವಿರುವ ತಜ್ಞರ ಮತ್ತು ಸಿಬ್ಬಂದಿ ವರ್ಗದವರ ನೇಮಕಾತಿ ಪ್ರಕ್ರಿಯೆ ಚಾಲನೆಯಲ್ಲಿದೆ.

ಆ) **ಮತ್ತು** ಇ) ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಆಸ್ಪತ್ರೆಗಳಿಂದ ಬೇಡಿಕೆ ಬಂದಲ್ಲಿ ನಿಯಮಾನುಸಾರ ಆಸ್ಪತ್ರೆಯ ಮೂಲಭೂತ ಸೌಕರ್ಯಗಳನ್ನು ಗಣನೆಗೆ ತೆಗೆದುಕೊಂಡು ಅವುಗಳನ್ನು ಪೂರೈಸಲು ಕ್ರಮ ಕೈಗೊಳ್ಳಲಾಗುವುದು.

ವಿದ್ಯಾರ್ಥಿ ನಿಲಯಗಳ ಕಟ್ಟಡಗಳು ಶಿಥಿಲಾವಸ್ಥೆಯಲ್ಲಿರುವುದು